# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಯಲಹಂಕ ಉಪನಗರ ಉಪವಿಭಾಗ, ಬೆಂಗಳೂರು.

ದಿನಾಂಕ:21-06-2022 ರಂದು ಮಧ್ಯಾಹ್ನ 2.30 ಗಂಟೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ನಂ:03 ರಲ್ಲಿ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿಗಳ ಹೆಸರು | ಪದನಾಮ |
|---|---|---|
| 1 | ಶ್ರೀ.ರಾಜಶೇಖರಯ್ಯ | ನೋಡಲ್ ಅಧಿಕಾರಿಗಳು ವಾರ್ಡ್ ನಂ:03, ಹಾಗೂ ಸಹಾಯಕ ನಿಯಂತ್ರಕರು (ಹಣಕಾಸು) ಯಲಹಂಕ ವಲಯ |
| 2 | ಶ್ರೀ.ಬಿ.ಎನ್.ರಾಮಕೃಷ್ಣಯ್ಯ | ಸಹಾಯಕ ಅಭಿಯಂತರರು, ವಾರ್ಡ್ ಕಮಿಟಿ ಸಹ ಕಾರ್ಯದರ್ಶಿ |
| 3 | ಶ್ರೀ.ಮಂಜುನಾಥ್ | ಸಹಾಯಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ, ಯಲಹಂಕ |
| 4 | ಶ್ರೀ.ಭಾರ್ಗವ್ | ಹಿರಿಯ ಆರೋಗ್ಯ ಪರಿವೀಕ್ಷಕರು, ಅಟ್ಟೂರು, ವಾರ್ಡ್ ನಂ:03 |
| 5 | ಶ್ರೀಮತಿ.ಚಂದ್ರಿಕಾ | ಕಿರಿಯ ಆರೋಗ್ಯ ಪರಿವೀಕ್ಷಕರು ಅಟ್ಟೂರು, ವಾರ್ಡ್ ನಂ:03 |
| 6 | ಶ್ರೀ.ಆನಂದ್ | ಸಹಾಯಕ ಅಭಿಯಂತರರು ಬೆಸ್ಕಾಂ, ಯಲಹಂಕ |
| 7 | ಶ್ರೀ.ಪಿ.ನಾಗೇಶ್ | ಸಾರ್ವಜನಿಕರು |
| 8 | ಶ್ರೀ.ಸತೀಶ್ | ಸಾರ್ವಜನಿಕರು ಎಂ.ಎಸ್.ಪಾಳ್ಯ, ಸೆಂಚುರಿ ಸಾರಾ ರಸ್ತೆ |
| 9 | ಶ್ರೀ.ಪಂಡಿತಾರಾಧ್ಯ | 707 ಸಿ.ಹೆಚ್.ಎಸ್, ಅಟ್ಟೂರು, ಯಲಹಂಕ ಉಪನಗರ |

ದಿನಾಂಕ:21-06-2022 ರಂದು ಮಧ್ಯಾಹ್ನ 02.30 ಗಂಟೆಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪನಗರ ಉಪವಿಭಾಗ ಕಛೇರಿಯಲ್ಲಿ ವಾರ್ಡ್ ನಂ:03, ಅಟ್ಟೂರು, ವಾರ್ಡ್ ನೋಡಲ್ ಅಧಿಕಾರಿಗಳಾದ ಶ್ರೀ.ರಾಜಶೇಖರಯ್ಯ, ಎ.ಸಿ.ಎಫ್ ರವರ ಅಧ್ಯಕ್ಷತೆಯಲ್ಲಿ ವಾರ್ಡ್ ನಂ:03, ಅಟ್ಟೂರು ವ್ಯಾಪ್ತಿಗೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳು, ವಾರ್ಡ್ ಸಮಿತಿ ಸದಸ್ಯರು ಹಾಗೂ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪ್ರತಿನಿಧಿಗಳೊಂದಿಗೆ ನಡೆಸಿದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮತೆಗೆದು ಕೊಳ್ಳಬೇಕಾಗಿರುವ ಅಧಿಕಾರಿ / ಇಲಾಖೆ |
|---|---|---|---|
| 1 | ಮುನೇಶ್ವರ ಬಡಾವಣೆ, 1ನೇ ಕ್ರಾಸ್, 1ನೇ ಮುಖ್ಯರಸ್ತೆ ಇಲ್ಲಿ ಛೇಂಬರ್ ಬ್ಲಾಕ್ ಆಗಿದ್ದು, ಸರಿಪಡಿಸಿಕೊಡಲು ಕೋರಿರುತ್ತಾರೆ. | ಸಭೆಯಲ್ಲಿದ್ದ ಬಿ.ಡಬ್ಲ್ಯು.ಎಸ್.ಎಸ್.ಬಿ ಇಂಜೀನಿಯರ್ ಮಂಜುನಾಥ್ ರವರು ಕ್ರಮಕೈಗೊಳ್ಳುವ ಬಗ್ಗೆ ತಿಳಿಸಿದರು. | ಸ.ಕಾ.ಅ ಬಿ.ಡಬ್ಲ್ಯು.ಎಸ್.ಎಸ್.ಬಿ ಯಲಹಂಕ |

| | | | |
|---|---|---|---|
| 2 | ಶ್ರೀಮತಿ.ಕವಿತಾ ರವರು ತಿರುಮಲನಗರದ 1ನೇ ಕ್ರಾಸ್‌ನಲ್ಲಿ ಕಸವನ್ನು ಸರಿಯಾಗಿ ವಿಲೇವಾರಿ ಮಾಡದೇ ಇರುವ ಬಗ್ಗೆ ತಿಳಿಸಿರುತ್ತಾರೆ. | ಇದಕ್ಕೆ ಸಂಬಂಧಿಸಿದಂತೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಕ್ರಮವಹಿಸುವುದಾಗಿ ತಿಳಿಸಿದರು. | ಸ.ಕಾ.ಅ ಘನತ್ಯಾಜ್ಯ ನಿರ್ವಹಣೆ ಕೋಶ, ಯಲಹಂಕ ಉಪನಗರ,ಬಿ.ಬಿ.ಎಂ.ಪಿ |
| 3 | ಶ್ರೀಮತಿ.ಕವಿತಾ ತಿರುಮಲನಗರ 1ನೇ ಕ್ರಾಸ್ ಸೀವೇಜ್ ನೀರು ರಸ್ತೆಯಲ್ಲಿ ಹರಿಯುತ್ತಿರುವ ಬಗ್ಗೆ ತಿಳಿಸಿದರು. | ಸಭೆಯಲ್ಲಿದ್ದ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಂಜಿನೀಯರ್ ಮಂಜುನಾಥ್ ರವರು ಕ್ರಮಕೈಗೊಳ್ಳುವ ಬಗ್ಗೆ ತಿಳಿಸಿದರು. | ಸ.ಕಾ.ಅ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಲಹಂಕ |
| 4 | ಶ್ರೀಮತಿ.ಕವಿತಾ ತಿರುಮಲನಗರ 1ನೇ ಕ್ರಾಸ್‌ನಲ್ಲಿ ಕುಡಿಯುವ ನೀರನ್ನು ಸರಿಯಾಗಿ ಬಿಡದೇ ಇರುವ ಬಗ್ಗೆ ತಿಳಿಸಿರುತ್ತಾರೆ. | ಸಭೆಯಲ್ಲಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಂಜಿನೀಯರ್ ಮಂಜುನಾಥ್ ರವರು ಕ್ರಮಕೈಗೊಳ್ಳುವ ಬಗ್ಗೆ ತಿಳಿಸಿದರು. | ಸ.ಕಾ.ಅ ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಲಹಂಕ |
| 5 | ತಿರುಮಲನಗರ ಗಿಡಗಳು ಬಹಳ ದಟ್ಟವಾಗಿ ಬೆಳೆದಿದ್ದು ಅದನ್ನು ಟ್ರಿಮ್ ಮಾಡಿಕೊಡಲು ಕೋರಿರುತ್ತಾರೆ. | ಬಿ.ಬಿ.ಎಂ.ಪಿ ಅರಣ್ಯ ಇಲಾಖೆಯವರು ಕ್ರಮಕೈಗೊಳ್ಳಲು ತಿಳಿಸಲಾಗುವುದು. | ವಲಯ ಅರಣ್ಯಾಧಿಕಾರಿಗಳು, ಯಲಹಂಕ ವಲಯ |
| 6 | ಮಾನ್ಯ ಆಯುಕ್ತರ ನಿರ್ದೇಶನದಂತೆ 2022-23ನೇ ಸಾಲಿನ ವಾರ್ಡ್ ಮಟ್ಟದ ಕಾಮಗಾರಿಗಳ ಕಾರ್ಯಕ್ರಮ ಪಟ್ಟಿಯನ್ನು ರೂ.530.00 ಲಕ್ಷಗಳಿಗೆ ತಯಾರಿಸಲಾಗಿದ್ದು, ಅನುಮೋದನೆಗಾಗಿ ಮಂಡಿಸಿದೆ. | ಸ.ಕಾ.ಅ, ಯ.ಉ.ಉ.ವಿ ರವರಿಗೆ ಕಾರ್ಯಕ್ರಮ ಪಟ್ಟಿಗೆ ವಾರ್ಡ್ ಸಮಿತಿ ಸಭೆಯಲ್ಲಿ ಅನುಮೋದನೆ ಪಡೆದು ಮುಂದಿನ ಸೂಕ್ತ ಕ್ರಮಕ್ಕಾಗಿ ಮೇಲಾಧಿಕಾರಿಗಳಿಗೆ ಸಲ್ಲಿಸಲು ತಿಳಿಸಲಾಗಿದೆ. | ಸ.ಕಾ.ಅ ಯ.ಉ.ಉ.ವಿ, ಬಿ.ಬಿ.ಎಂ.ಪಿ |

ಸದಸ್ಯ ಕಾರ್ಯದರ್ಶಿ
ವಾರ್ಡ್ ನಂ:03, ಅಟ್ಟೂರು
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:-

1) ಮಾನ್ಯ ಜಂಟಿ ಆಯುಕ್ತರು ಬಿ.ಬಿ.ಎಂ.ಪಿ, ಯಲಹಂಕ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
3) ನೋಡಲ್ ಅಧಿಕಾರಿ, ವಾರ್ಡ್ ನಂ:03, ಅಟ್ಟೂರು, ಯಲಹಂಕ ವಲಯ ರವರ ಮಾಹಿತಿಗಾಗಿ ಸಲ್ಲಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪನಗರ ಉಪವಿಭಾಗ, ಬಿ.ಬಿ.ಎಂ.ಪಿ, ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ಕೋಶ, ವಾರ್ಡ್ ನಂ:03 ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ / ಬಿ.ಡಬ್ಲ್ಯೂ.ಎಸ್.ಎಸ್.ಬಿ ಯಲಹಂಕ ಉಪನಗರ ರವರಿಗೆ ಸೂಕ್ತ ಕ್ರಮಕ್ಕಾಗಿ.
7) ವಲಯ ಅರಣ್ಯಧಿಕಾರಿಗಳು, ಯಲಹಂಕ, ಬಿ.ಬಿ.ಎಂ.ಪಿ ರವರಿಗೆ ಸೂಕ್ತ ಕ್ರಮಕ್ಕಾಗಿ
8) ಕಛೇರಿ ಕಡತಕ್ಕೆ.

Office of The Solid Waste Management, BBMP, Yelahanka Division
No. Date: 29/06/22